12.10.2006ರಂದು ಹೊರಡಿಸಲಾದ ಡಿಪಿಎಆರ್ 85 ಎಸ್ಆರ್ಆರ್ 2006ನೇ ಸಂಖ್ಯೆಯ ಅಧಿಸೂಚನೆ.

5. 2006ರ ಕರ್ನಾಟಕ ನಾಗರೀಕ ಸೇವೆಗಳು (ಸೇವಾ ಮತ್ತು ಕನ್ನಡ ಭಾಷೆ ಪರೀಕ್ಷೆಗಳು) (2ನೇ ತಿದ್ದುಪಡಿ) ನಿಯಮಗಳ ಅನುಸೂಚಿ 1ಕ್ಕೆ ತಿದ್ದುಪಡಿ ಮಾಡಿ ದಿನಾಂಕ 15.11.2006ರಂದು ಹೊರಡಿಸಲಾದ ಡಿಪಿಎಆರ್ 24 ಎಸ್ಎಸ್ಆರ್ 2006ನೇ ಸಂಖ್ಯೆಯ ಅಧಿಸೂಚನೆ.

6. 1957ರ ಕರ್ನಾಟಕ ನಾಗರೀಕ ಸೇವೆಗಳು (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 15ಕ್ಕೆ ತಿದ್ದುಪಡಿ ಮಾಡಿ ದಿನಾಂಕ 16.11.2006ರಂದು ಹೊರಡಿಸಲಾದ ಡಿಪಿಎಆರ್ 5 ಎಸ್ಡಿಇ 2006ನೇ ಸಂಖ್ಯೆಯ ಅಧಿಸೂಚನೆ.

7. 2000ರ ಕರ್ನಾಟಕ ನಾಗರೀಕ ಸೇವೆಗಳು (ಕಾರ್ಯನಿರ್ವಹಣಾ ವರದಿಗಳು) ನಿಯಮಗಳ ನಿಯಮ 5ಎ ಅನ್ನು ಸೇರಿಸಿ ದಿನಾಂಕ 14.11.2006ರಂದು ಹೊರಡಿಸಲಾದ ಡಿಪಿಎಆರ್ 3 ಎಸ್ಸಿಆರ್ 2005ನೇ ಸಂಖ್ಯೆಯ ಅಧಿಸೂಚನೆ.

1959ರ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 130ರ ಪ್ರಕರಣದ ಮೇರೆಗೆ:

1960ರ ಕರ್ನಾಟಕ ಸಹಕಾರ ಸಂಘಗಳ ನಿಯಮಾವಳಿಯ ನಿಯಮ 12ಎ, 12ಬಿ, 14, 14ಎ, 17, 18, 21ಎ ಮತ್ತು 52ಕ್ಕೆ ತಿದ್ದುಪಡಿ ಮಾಡಿ ದಿನಾಂಕ 06.07.2006ರಂದು ಹೊರಡಿಸಲಾದ ಸಿಓ 226 ಸಿಎಲ್ಎಂ 2005ನೇ ಸಂಖ್ಯೆಯ ಅಧಿಸೂಚನೆಗಳನ್ನು ಮಂಡಿಸುತ್ತೇನೆ.

II. ಶ್ರೀ ಕೆ.ಎಸ್. ಈಶ್ವರಪ್ಪ (ಜಲಸಂಪನ್ಮೂಲ ಸಚಿವರು) ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಮತ್ತು ಹಣಕಾಸು ಸಚಿವರು) ಅವರ ಪರವಾಗಿ

ಭಾರತ ಸಂವಿಧಾನದ 213 (2) (ಎ) ಅನುಚ್ಛೇದದ ಮೇರೆಗೆ:

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ (ತಿದ್ದುಪಡಿ)ಗೆ ಸಂಬಂಧಿಸಿದಂತೆ ಹೊರಡಿಸಿರುವ ಸಂವ್ಯಶಾಇ 18 ಶಾಸನ 2006 ದಿನಾಂಕ 27.11.2006ರ ಆಧ್ಯಾದೇಶ–ಸಂಖ್ಯೆ 2.